# ಮೈಸೂರು ವಿಶ್ವವಿದ್ಯಾನಿಲಯ

Estd 1916
(Re-accredited by NAAC with CGPA 3.47 on four point scale with A Grade)

ಸಂಖ್ಯೆ: ಪವಿ/8.6/07(2)/ಅಧಿಸೂಚನೆ/2015-16

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು-570 005
**ದಿನಾಂಕ: 11-07-2022**

## ಅ ಧಿ ಸೂ ಚ ನೆ

ವಿಷಯ: ಆಗಸ್ಟ್-**2022**ರಲ್ಲಿ ಜರುಗಲಿರುವ 5ನೇ ಸೆಮಿಸ್ಟರ್‌ನ (Makeup) ಸ್ನಾತಕ (UG) ಪದವಿಯ [CBCS Scheme] ಪರೀಕ್ಷೆಗಳ ಬಗ್ಗೆ.

ಉಲ್ಲೇಖ: ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರ ಟಿಪ್ಪಣಿ ಸಂಖ್ಯೆ:ಎಸಿ2(ಎಸ್)/525/2009-10, ದಿನಾಂಕ: 09.05.2022 (ಇದೊಂದು ಬಾರಿಗೆ 5ನೇ ಸೆಮಿಸ್ಟರ್‌ನ ಪರೀಕ್ಷೆ ನಡೆಸಲು ತಿಳಿಸಿರುವುದು).

*****

ಆಗಸ್ಟ್-**2022**ರ ಮಾಹೆಯಲ್ಲಿ ನಡೆಯಲಿರುವ ಎಲ್ಲಾ ಸ್ನಾತಕ (UG) ಪದವಿಯ [CBCS Scheme] **5ನೇ ಸೆಮಿಸ್ಟರ್‌ನ (Makeup)** ಪರೀಕ್ಷೆಗಳ ವಿವರಗಳು ಕೆಳಕಂಡಂತಿರುತ್ತವೆ:

| ಕ್ರಸಂ | ವಿವರುಗಳು | ಅಂತಿಮ ದಿನಾಂಕ |
|---|---|---|
| 1 | ಪರೀಕ್ಷಾ ಶುಲ್ಕ ಪಾವತಿಸಲು ಮತ್ತು ಭರ್ತಿಮಾಡಿದ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು | **23.07.2022** |
| 2 | ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನವರು ಭರ್ತಿ ಮಾಡಲು | **25.07.2022** |
| 3 | ಪರೀಕ್ಷಾ ಶುಲ್ಕವನ್ನು ಚಲನ್ ಮೂಲಕ ಪರೀಕ್ಷಾ ಖಾತೆಗೆ ಪರೀಕ್ಷಾ ಖಾತೆ ಸಂಖ್ಯೆ: **54007591200 (Examination Account)** SBI, University Campus, Mysuru ಇವರಿಗೆ ಪಾವತಿಸಿ, ಚಲನ್ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು | **26.07.2022** |
| 4 | ಪ್ರವೇಶ ಪತ್ರಗಳ ಮುದ್ರಣದ ನಂತರ ವಿಶ್ವವಿದ್ಯಾನಿಲಯದ ಅನುಮೋದನೆ ಪಡೆಯಲು [ಆನ್‌ಲೈನ್ ಮೂಲಕ ಅಭ್ಯರ್ಥನಾ ಪಟ್ಟಿಯನ್ನು ಮುದ್ರಿಸಿ ಪ್ರಾಂಶುಪಾಲರ ಸಹಿ ಪಡೆದು ಒಂದು ಪ್ರತಿಯನ್ನು ಪ್ರವೇಶ ಪತ್ರಗಳ ಜೊತೆಯಲ್ಲಿ ಕುಲಸಚಿವ (ಪರೀಕ್ಷಾಂಗ) ಅವರಿಗೆ ಸಲ್ಲಿಸಬೇಕು] | **28.07.2022** |
| 5 | **ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ** | **ಮುಂದೆ ತಿಳಿಸಲಾಗುವುದು** |

**ಸೂಚನೆಗಳು:**

1. ಪ್ರಾಯೋಗಿಕ ಪರೀಕ್ಷೆಗಳು ಮುಗಿದ ನಂತರ ಆ ದಿನದಂದೇ **Online** ಮುಖಾಂತರ ಅಂಕಗಳನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಅಂಕಗಳ ಮೂಲಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.
2. **CBCS** ಸ್ಕೀಂನ 5ನೇ ಸೆಮಿಸ್ಟರ್‌ನ ಪರೀಕ್ಷಾ ಅರ್ಜಿಗಳನ್ನು ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿದ ದಿನದಂದೇ ಆನ್‌ಲೈನ್‌ನಲ್ಲಿ ನಮೂದಿಸುವುದು.
3. ಪರೀಕ್ಷಾ ಅರ್ಜಿಯು **PDF Mode** ನಲ್ಲಿದ್ದು ವಿದ್ಯಾರ್ಥಿ ಪೋರ್ಟಲ್, ಕಾಲೇಜ್ ಪೋರ್ಟಲ್ ಮತ್ತು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಲಭ್ಯವಿದ್ದು, ವಿದ್ಯಾರ್ಥಿಗಳು ಸದರಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವುದು.

4. ಎಲ್ಲಾ ಪದವಿ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನ ಇಂಟರ್‌ನೆಟ್ ಸೌಲಭ್ಯವನ್ನು ಬಳಸಿ ನೇರವಾಗಿ ವಿಶ್ವವಿದ್ಯಾನಿಲಯದ **Web Server** ಗೆ ಮಾಹಿತಿಯನ್ನು ವರ್ಗಾವಣೆ **(Online Transmission)** ಮಾಡುವಂತೆ/ ನಮೂದಿಸುವಂತೆ ತಿಳಿಸಲಾಗಿದೆ. ಅನಿವಾರ್ಯ ಕಾರಣದಿಂದಾಗಿ ಕಾಲೇಜಿನಲ್ಲಿ ಇಂಟರ್‌ನೆಟ್ ಸೌಲಭ್ಯವಿಲ್ಲದಿದ್ದ ಪಕ್ಷದಲ್ಲಿ ಸ್ಥಳೀಯವಾಗಿ ಲಭ್ಯವಿರುವ ಯಾವುದೇ ಕಂಪ್ಯೂಟರ್ ಕೇಂದ್ರದಿಂದಲೂ ಮಾಹಿತಿ ರವಾನಿಸಬಹುದಾಗಿದೆ.

5. **Covid-19** ಹಿನ್ನೆಲೆ ಹಾಗೂ ಸಮಯದ ಅಭಾವವಿರುವುದರಿಂದ ಪ್ರಾಯೋಗಿಕ ಪರೀಕ್ಷೆಗಳನ್ನು ಲಿಖಿತ ಪರೀಕ್ಷೆಗಳು ಆರಂಭವಾಗುವ ಮುನ್ನ [ಕಾಲೇಜು ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಇದೊಂದು ಬಾರಿಗೆ ವ್ಯವಸ್ಥೆ ಮಾಡಿಕೊಂಡು] ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲು ಅನುಮತಿ ನೀಡಲಾಗಿದೆ. ಸದರಿ ಪರೀಕ್ಷೆಗೆ ಬಾಹ್ಯ ಪರೀಕ್ಷಕರು **(External Examiners)** ಲಭ್ಯವಾಗದ ಸಂದರ್ಭದಲ್ಲಿ ಆಂತರಿಕ ಪರೀಕ್ಷಕರನ್ನೇ ಬಳಸಿಕೊಂಡು ಪರೀಕ್ಷೆ ನಡೆಸುವುದು **(Internal Examiners).**

6. ಉಲ್ಲೇಖಿತ ಟಿಪ್ಪಣಿಯಂತೆ, ಪ್ರಸ್ತುತ ಸ್ನಾತಕ ಪದವಿಯ **(CBCS-Scheme)** 5ನೇ ಸೆಮಿಸ್ಟರ್‌ನ ಪರೀಕ್ಷೆಗಳನ್ನು ಹೊರತುಪಡಿಸಿ ಬೇರೆ ಯಾವುದೇ ಸೆಮಿಸ್ಟರ್‌ಗಳಿಗೆ (Makeup) ಪರೀಕ್ಷೆಗಳು ನಡೆಯುವುದಿಲ್ಲ.

## ಪರೀಕ್ಷಾ ಶುಲ್ಕಗಳ ದರಗಳು

(ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ ರೂ.320/– ಗಳನ್ನು ಕಡ್ಡಾಯವಾಗಿ ಪಾವತಿಸಬೇಕು)

| Sl. No. | Programme/Course | V Semester (CBCS Repeaters) |
|---|---|---|
| 1. | **B.A./B.P.A./B.A. (Fine Arts) B.V.A/B.Com :** | |
| | Whole Examination (per semester) | **Rs.1,060/-** |
| | Per paper with Practical | **Rs.570/-** |
| | Per paper without Practical | **Rs.440/-** |
| 2. | **B.Sc./BCA/B.Sc. in Family & Community Science:** | |
| | Whole Examination (per semester) | **Rs.1,100/-** |
| | Per paper with Practical | **Rs.570/-** |
| | Per paper without Practical | **Rs.440/-** |
| 3. | **B.B.A/B.B.M./B.S.W./B.Sc.(Speech & Hearing) & B.Sc.Ed (H & I) :** | |
| | Whole Examination (per semester) | **Rs.1,300/-** |
| | Per paper with Practical | **Rs.770/-** |
| | Per paper without Practical | **Rs.440/-** |
| | BASLP (Internship fee for 4th year) | **Rs.2,000/-** |
| | **B.B.A (T&H)/B.B.A(T&T)/B.T.H./B.B.A.(T.H.M) :** | |
| | Whole Examination (per semester) | **Rs.2,500/-** |
| | Per paper with Practical | **Rs.770/-** |
| | Per paper without Practical | **Rs.440/-** |

***Subject to a maximum of whole examination Fee fixed per semester***

**NOTE:** For Science subjects in Semester Scheme, if a candidate is declared exempted for any Practical examination, Examination fee for such candidate is same as that of per paper without Practical/Skill Development.

**ಸೂಚನೆಗಳು:**

1. ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ.
2. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಚಾತುರ್ಮಾಸದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಅಂಕಪಟ್ಟಿ ಶುಲ್ಕ **ರೂ.320/–**ನ್ನು ಸಹ ಪಾವತಿಸತಕ್ಕದ್ದು. ಪರೀಕ್ಷಾ ಅರ್ಜಿಗೆ ಪ್ರತ್ಯೇಕ ಶುಲ್ಕವಿರುವುದಿಲ್ಲ.
3. **ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ ಅವರ ಪತ್ರ ಸಂಖ್ಯೆ:ಎಸಿ2/182/92–93 ದಿನಾಂಕ:15–10–1999 ರ ಪತ್ರದಲ್ಲಿ ತಿಳಿಸಿರುವ ರೀತ್ಯಾ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ–1ರ ವಿದ್ಯಾರ್ಥಿಗಳು ಹಿಂದಿನ ಸೆಮಿಸ್ಟರ್‌ಗಳ ಪತ್ರಿಕೆಗಳಲ್ಲಿ ಅನುತ್ತೀರ್ಣರಾಗಿ ಮತ್ತೆ ಪರೀಕ್ಷೆ ತೆಗೆದುಕೊಂಡಲ್ಲಿ ಅಥವಾ ತಮ್ಮ ಕೋರ್ಸನ್ನು ಮುಗಿಸಿದ ನಂತರ ರಿಪೀಟರ್ಸ್ ಆಗಿ ಪರೀಕ್ಷೆಗಳನ್ನು ತೆಗೆದುಕೊಂಡಲ್ಲಿ, ಅಂತಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ತಪ್ಪದೆ ವಸೂಲು ಮಾಡಬೇಕೆಂದು ತಿಳಿಸಲಾಗಿದೆ. ಆದುದರಿಂದ ಇಂತಹ ವಿದ್ಯಾರ್ಥಿಗಳು ಶುಲ್ಕವನ್ನು ತಪ್ಪದೆ ಪಾವತಿಸುವುದು.**
4. **ಪಾವತಿಸಬೇಕಾದ ಒಟ್ಟು ಶುಲ್ಕವನ್ನು ಪರೀಕ್ಷಾ ಖಾತೆ ಸಂಖ್ಯೆ: 54007591200 (Examination Account) ಗೆ DD ಮೂಲಕ Finance Officer, University of Mysore, Mysuru ಇವರ ಹೆಸರಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಶ್ವವಿದ್ಯಾನಿಲಯ ಶಾಖೆ, ಮೈಸೂರು ಇಲ್ಲಿ ಸಂದಾಯ ಮಾಡಿ ಮೂಲ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.**
5. ಅಭ್ಯರ್ಥಿಗಳಿಂದ ನಗದಾಗಿ ಪಡೆದ ಒಟ್ಟು ಶುಲ್ಕಕ್ಕೆ ಮೇಲೆ ತಿಳಿಸಿರುವ ದಿನಾಂಕದೊಳಗಾಗಿ ಡಿಡಿ ಮೂಲಕ ಹಣ ಸಂದಾಯ ಮಾಡಿ ಚಲನ್‌ನ ಪ್ರತಿಯನ್ನು ಕುಲಸಚಿವ (ಪರೀಕ್ಷಾಂಗ) ಇವರಿಗೆ ಕಳುಹಿಸುವ ಜವಾಬ್ದಾರಿ ಕಾಲೇಜಿನ ಪ್ರಾಂಶುಪಾಲರಿಗೆ ಇರುತ್ತದೆ.
6. ವಿಶ್ವವಿದ್ಯಾನಿಲಯಕ್ಕೆ ಹಣ ಸಂದಾಯಮಾಡುವ ಸಂದರ್ಭದಲ್ಲಿ ಚಲನ್‌ನಲ್ಲಿ ಪ್ರತಿ ಪದವಿಯ ಸೆಮಿಸ್ಟರ್‌ವಾರು ಅಂಕಪಟ್ಟಿ ಶುಲ್ಕ, ಪರೀಕ್ಷಾ ಶುಲ್ಕ ಮತ್ತು ಪದವಿ ಪ್ರಮಾಣಪತ್ರ ಶುಲ್ಕವನ್ನು ಪ್ರತ್ಯೇಕವಾಗಿ ನಮೂದಿಸಿ ವಿವರಣೆಯೊಂದಿಗೆ ಸಲ್ಲಿಸಬೇಕು.
7. ಅಭ್ಯರ್ಥನಾ ಪಟ್ಟಿಯ ಪ್ರತಿಪುಟದಲ್ಲಿ ಒಟ್ಟಾರೆ ಶುಲ್ಕವನ್ನು ಕ್ರೋಢೀಕರಿಸಿ ಅದನ್ನು ಮುಂದಿನ ಪುಟಕ್ಕೆ ಮುಂದುವರೆಸಿ ಕೊನೆಪುಟದಲ್ಲಿ ಒಟ್ಟಾರೆ ಸಂದಾಯವಾಗಬೇಕಿರುವ ಶುಲ್ಕವನ್ನು ನಮೂದಿಸಬೇಕು.

**ವಿಶೇಷ ಸೂಚನೆಗಳು:**

1. ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆಯಾಯ ಕಾಲೇಜಿನವರು ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಸಾಕಷ್ಟು ಮುಂಚಿತವಾಗಿ online ಮೂಲಕ ಪಡೆದು, ಕುಲಸಚಿವರು (ಪರೀಕ್ಷಾಂಗ) ಇವರ ಯಥಾಪ್ರತಿ (Facsimile) ಹಾಕಿಸಿಕೊಳ್ಳಬೇಕು ಮತ್ತು ಕುಲಸಚಿವ(ಪ) ಅವರ ಯಥಾಪ್ರತಿ (Facsimile) ಇಲ್ಲದೆ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಕೂರಿಸಕೂಡದು.
2. ಪರೀಕ್ಷಾ ಶುಲ್ಕವನ್ನು ಪಾವತಿಸಲು ಸಾಕಷ್ಟು ಕಾಲಾವಕಾಶ ನೀಡಿರುವುದರಿಂದ ವಿದ್ಯಾರ್ಥಿಗಳಿಗೆ ಸೂಕ್ತ ತಿಳುವಳಿಕೆ ನೀಡಿ, ನಿಗದಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಯಾವುದೇ ಕಾರಣಕ್ಕೂ ಪರೀಕ್ಷಾ ಶುಲ್ಕ ಪಾವತಿಸಲು ಹೆಚ್ಚುವರಿ ಕಾಲಾವಕಾಶ ನೀಡಲಾಗುವುದಿಲ್ಲ.

**ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
2. **ಪರೀಕ್ಷೆಗಳನ್ನು ಮುಂದೂಡಬೇಕೆಂದು ಬರುವ ಯಾವ ಬಗೆಯ ಮನವಿಯನ್ನು ಯಾವುದೇ ಕಾರಣಕ್ಕೂ ಪುರಸ್ಕರಿಸಲಾಗುವುದಿಲ್ಲ.** ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
3. ವಿಳಂಬವಾಗಿ (ಟಿ.ಎ.ಎಲ್) ಫಲಿತಾಂಶ ಪ್ರಕಟವಾಗುವ ವಿದ್ಯಾರ್ಥಿಗಳಿಗೆ ಅವರ ಫಲಿತಾಂಶವು ತಲುಪಿದ ದಿನಾಂಕದಿಂದ 7 ದಿವಸಗಳ ಅವಧಿಯೊಳಗೆ ಯಾವುದೇ ರೀತಿಯ ದಂಡ ಶುಲ್ಕವಿಲ್ಲದೆ ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ಇರುತ್ತದೆ.

4. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ, ಎಂದು ಬರೆಯಿಸಿ ಪ್ರಾಂಶುಪಾಲರಿಂದ ಸಹಿ ಮಾಡಿಸಿ ಅವರ ಪ್ರವೇಶ ಪತ್ರಿಕೆಗೆ ಅಂಟಿಸಿ ಪರೀಕ್ಷಾ ಅರ್ಜಿಯೊಡನೆ ಕಾಲೇಜಿಗೆ ನೀಡಬೇಕು.
5. **ಭಾವಚಿತ್ರಗಳಿಲ್ಲದ ಹಾಗೂ ಕುಲಸಚಿವರು (ಪರೀಕ್ಷಾಂಗ) ಅಥವಾ ಪ್ರಾಂಶುಪಾಲರ ಸಹಿ/ಮೊಹರು ಇಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.**

**ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:**

1. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ (ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.
2. ವಿದ್ಯಾರ್ಥಿಗಳು ಗೈರುಹಾಜರಾದಲ್ಲಿ ಆ ಪರೀಕ್ಷಾ ದಿನದಂದೇ ಆನ್‌ಲೈನ್ ಮುಖಾಂತರ ಗೈರುಹಾಜರಿಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

11/7/22

ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು/ಡೀನರು, ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು/ಜೆ.ಎಸ್.ಎಸ್. ಕಾಲೇಜು ವಾಕ್ ಮತ್ತು ಶ್ರವಣ ಸಂಸ್ಥೆ, ಎಂ.ಜಿ. ರಸ್ತೆ, ಚಾಮರಾಜೇಂದ್ರ ದೃಶ್ಯ ಕಲಾ ಅಕಾಡೆಮಿ (ಕಾವ) ಸಿದ್ದಾರ್ಥನಗರ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾಧಿಕಾರಿಗಳ ಕಛೇರಿ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆ, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
5. ಜಿಲ್ಲಾ ಖಜಾನಾಧಿಕಾರಿಗಳು, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
6. ಆರಕ್ಷಕ ಅಧೀಕ್ಷಕರು, ಮೈಸೂರು/ಮಂಡ್ಯ/ಹಾಸನ/ಚಾಮರಾಜನಗರ.
7. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು.
8. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ, ವಾರ್ತಾ ಭವನ, ಎಚ್.ಸಿ.ದಾಸಪ್ಪ ವೃತ್ತ, ಮೈಸೂರು – ಮೇಲ್ಕಂಡ ಪ್ರಕಟಣೆ ಮುಖ್ಯಾಂಶಗಳನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಕೋರಿ ಪ್ರತಿ ಕಳುಹಿಸಲಾಗಿದೆ.
9. ನಿರ್ದೇಶಕರು, ಪ್ರಸಾರ ಭಾರತಿ ಕೇಂದ್ರ, ಯಾದವಗಿರಿ, ಮೈಸೂರು – ಈ ಅಧಿಸೂಚನೆಯ ಮುಖ್ಯಾಂಶಗಳನ್ನು ತಮ್ಮ ಬಾನುಲಿ ಹಾಗೂ ಟಿ.ವಿ ವಾಹಿನಿ ಕೇಂದ್ರದಿಂದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಾಗೆ ಬಿತ್ತರಿಸಲು ಏರ್ಪಾಟನ್ನು ಮಾಡಲು ಕೋರಿದೆ.
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ವಿಭಾಗ, ಮಾನಸಗಂಗೋತ್ರಿ, ಮೈಸೂರು 570 006.
11. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಉಪಕುಲಸಚಿವರು (ಶೈಕ್ಷಣಿಕ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
14. ಅಧ್ಯಕ್ಷರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
15. ವಿಶೇಷಾಧಿಕಾರಿಗಳು, ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
16. ವ್ಯವಸ್ಥಾಪಕರು, ಮೆಟಾ–ಐ ಟೆಕ್ನಾಲಾಜೀಸ್ ಪ್ರೈವೇಟ್ ಲಿಮಿಟೆಡ್, ಪರೀಕ್ಷಾ ಭವನ, ಮೈ.ವಿ.ವಿ. ಮೈಸೂರು.
17. ಪರೀಕ್ಷಾ ವಿಭಾಗದ ಎಲ್ಲಾ ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
18. ಎಲ್ಲಾ ಕಾರ್ಯನಿರ್ವಾಹಕರು (ಸಾಮಾನ್ಯ ವಿಭಾಗ ಮತ್ತು ಸ್ನಾತಕಪದವಿ ವಿಭಾಗ) ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
19. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿ ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
20. ಕಛೇರಿ ಪ್ರತಿ.